ಪಿ.ಡಬ್ಲ್ಯೂ.1.                                                    ಅಸಲು ದಾವಾ ಸಂಖ್ಯೆ. 395/2020

**ದಿನಾಂಕಃ 15.02.2022 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ವಾದಿ ಪರ ವಕೀಲರಾದ ಶ್ರೀ.ಎನ್ ಬಿ ಎ ರವರಿಂದ**

ನಾನು ಈ ದಾವೆಯಲ್ಲಿ ವಾದಿ ಇದ್ದು, ನನ್ನ ಮುಖ್ಯ ವಿಚಾರಣೆಯ ಬದಲಾಗಿ ನಾನು ನನ್ನ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿರುವ ಎಲ್ಲಾ ವಿಷಯಗಳನ್ನು ನಾನು ನನ್ನ ವಕೀಲರಿಗೆ ಹೇಳಿ ಬರೆಯಿಸಿ, ಓದಿಸಿ ತಿಳಿದುಕೊಂಡು ಮನಗೊಂಡ ನಂತರ ಸಹಿ ಮಾಡಿರುತ್ತೇನೆ. ನನ್ನ ಪ್ರಮಾಣ ಪತ್ರದಲ್ಲಿರುವ ಎಲ್ಲಾ ವಿಷಯಗಳು ನಿಜ ಮತ್ತು ಸತ್ಯ ಸಂಗತಿಗಳಾಗಿರುತ್ತವೆ.

ವಂಶವೃಕ್ಷದ ದೃಢೀಕರಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ.1 ಎಂದು, ತಿಮ್ಮಯ್ಯನವರ ಮರಣ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ.2 ಎಂದು, ಮ್ಯೂಟೇಷನ್ ರಿಜಿಸ್ಟರ್ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ..3 ಎಂದು, ಸರ್ವೆ ನಂ.115/1 ಕ್ಕೆ ಸಂಬಂಧಪಟ್ಟ 21 ಆರ್ ಟಿ ಸಿ ಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ.4 ರಿಂದ 26 ಎಂದು, ಸರ್ವೆ ನಂ.109/2 ಕ್ಕೆ ಸಂಬಂಧಪಟ್ಟ 24 ಆರ್ ಟಿ ಸಿ ಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ. 27 ರಿಂದ 52 ಎಂದು, ಸರ್ವೆ ನಂ.102/1 ಕ್ಕೆ ಸಂಬಂಧಪಟ್ಟ 21 ಆರ್ ಟಿ ಸಿ ಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ.53 ರಿಂದ 72 ಎಂದು ಗುರುತಿಸಲಾಯಿತು.

ಮುಂದುವರಿದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು, ಆಲಿಸಿ ನೀಡಲಾಯಿತು.

ಓದಿ ಹೇಳಿ ಕೇಳಿ ಸರಿ ಇದೆ ಎಂದು ಒಪ್ಪಿ

ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ.,
ಗುಬ್ಬಿ.